**ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ. ಎಂ. ಎಫ್.ಸಿ., ನ್ಯಾಯಾಲಯ ಚನ್ನಪಟ್ಟಣ ಚನ್ನಪಟ್ಟಣ.**

**ಸಿ.ಸಿ. ಸಂಖ್ಯೆ: 257/2019**

ಚಾಸಾ:3 ಪ್ರಾಸಾ:2

| | | |
|---|---|---|
| ಹೆಸರು | : | ಶಂಕರ್ |
| ಗಂಡನ/ತಂದೆಯ ಹೆಸರು | : | ಲೇಟ್ ಹೊಟ್ಟೆ ಮಾದಯ್ಯ |
| ವಯಸ್ಸು | : | 55 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ | : | ಭೂ ಹಳ್ಳಿ ಗ್ರಾಮ |

**ದಿನಾಂಕ 16.03.2026 ರಂದು ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿ ಯವರಿಂದ:**

ಪೋಲಿಸರು ನನ್ನ ಸಮಕ್ಷಮ ಮಹಜರ್ ಮಾಡಿರುವುದಿಲ್ಲ. ಮಹಜರ್ ಅನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ನನ್ನ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಅದರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಆರೋಪಿಯಿಂದ ಯಾವುದೇ ಮದ್ಯವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಪೋಲಿಸರು ನನ್ನನ್ನು ವಿಚಾರಣೆ ಮಾಡಿ ಹೇಳಿಕೆ ಪಡೆದಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿರುತ್ತಾರೆ ಅನುಮತಿಸಲಾಯಿತು).**

**ಪಾಟೀ ಸವಾಲು: ಎಪಿಪಿಯವರಿಂದ:**

ದಿನಾಂಕ 14.04.2011 ರಂದು ಚಾಸಾ-1 ರವರು ನನ್ನನ್ನು ಸಿಂಗರಾಜಿಪುರ ಗ್ರಾಮದಿಂದ ಭೂ ಹಳ್ಳಿ ಗ್ರಾಮಕ್ಕೆ ಹೋಗುವ ರಸ್ತೆಯಲ್ಲಿ ಮಹಜರ್ ಕ್ರಮವನ್ನು ಜರುಗಿಸಲು ಪಂಚರಾಗಬೇಕು ಎಂದು ಕೋರಿಕೊಂಡ ಮೇರೆಗೆ ಮಧ್ಯಾಹ್ನ 3.00-4.00 ಗಂಟೆಯವರೆಗೆ ನನ್ನ ಸಮಕ್ಷಮ ಮಹಜರ್ ಕ್ರಮ ಜರುಗಿಸಿ ಒಂದು ದ್ವಿಚಕ್ರ ವಾಹನ ಸಂಖ್ಯೆ ಕೆ ಎ 04-ಹೆಚ್ ಎಫ್ 1650 ಟಿ ವಿ

ಎಸ್ ಸೂಪರ್ ಎಕ್ಸ್ ಎಲ್  ಮತ್ತು ಒಂದು ರಟ್ಟಿನ ಪೆಟ್ಟಿಗೆಯಲ್ಲಿ Haywards cheers whisky 90 ಎಂ ಎಲ್ ನ 96 ಪೌಚ್ ಗಳನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಸಾಕ್ಷಿಗೆ ನ್ಯಾಯಾಲಯದ ಮುಂದೆ ಇರುವ ಮು ಮಾ 1 ಗಳ ಮೇಲೆ ತನ್ನ ಸಹಿಯನ್ನು  ತೋರಿಸಲಾಗಿ  ಸಾಕ್ಷಿಯು ಸದರಿ ಮು ಮಾ1 ಅನ್ನು ನೋಡಿ ನನ್ನ ಸಹಿ ಇಲ್ಲವೆಂದು ನುಡಿಯುತ್ತಾರೆ. ದಿಃ16.02.2019 ರಂದು ನಾನು ಪ್ರಕರಣಕ್ಕೆ ಸಂಬಂದಪಟ್ಟಂತೆ ನಾನು ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಗೆ ಈಗ ಓದಿ ಹೇಳಿಲಾಗಿ ಸಾಕ್ಷಿ ಒಪ್ಪಿ ಕೊಳ್ಳದ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ಆರೋಪಿ ನಮ್ಮ ಊರಿನವರಾದ ಕಾರಣ ಅವರಿಗೆ ಅನುಕೂಲವಾಗಲೀ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಆರೋಪಿ ಪರ ವಕೀಲರು ಹಾಜರಿದ್ದು, ಪಾಟೀ ಸವಾಲು ಇಲ್ಲ ಎಂದು ನುಡಿಯುತ್ತಾರೆ

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

**(ವೆಂಕಟೇಶಪ್ಪ. ವಿ)**
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**